# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** m-governance ಯೋಜನೆಗಳಾದ ಇ–ಪಾವತಿ ಮತ್ತು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಅನುಷ್ಠಾನಗೊಳಿಸುವ ಕುರಿತು.

*****

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ m-governance ಯೋಜನೆಯ– ಇ–ಪಾವತಿ ಮತ್ತು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಅದರಂತೆ ಇ–ಪಾವತಿ Mobile Application ನ್ನು ಪ್ರಾಥಮಿಕ ಹಂತದಲ್ಲಿ ಪ್ರತಿ ಜಿಲ್ಲೆಯಲ್ಲಿ 05 ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿ ಒಟ್ಟು 150 ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳಿಸಲಾಗಿತ್ತು. ಈ ಬಗ್ಗೆ ಎಲ್ಲಾ ಜಿಲ್ಲೆಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ NIC ಮೂಲಕ ಈಗಾಗಲೇ ತರಬೇತಿ ನೀಡಲಾಗಿದೆ. ಹಾಗೂ ಇ–ಪಾವತಿ ಅನುಷ್ಠಾನಗೊಳಿಸಲು ಅಗತ್ಯವಿರುವ ಮೊಬೈಲ್ ಫೋನ್ ಮತ್ತು hand held printer ಉಪಕರಣಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (KTTP) ನಿಯಮಾನುಸಾರ ಖರೀದಿಸಿ ಕ್ರಮಕೈಗೊಳ್ಳಲು ಸಹ ತಿಳಿಸಲಾಗಿರುತ್ತದೆ ಹಾಗೂ ಗ್ರಾಮ ಪಂಚಾಯತ್‌ಗಳ ಜನಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಗ್ರಾಮ ಪಂಚಾಯತಿಗಳಿಗೆ ಎರಡು hand held printer ನ್ನು ನಿಯಮಾನುಸಾರ ಖರೀದಿಸಬಹುದಾಗಿದೆ. ಇ–ಪಾವತಿ Application ಮೂಲಕ ಬಿಲ್ ಕಲೆಕ್ಟರುಗಳು, ಪ್ರತಿ ಮನೆಗೆ ಭೇಟಿ ನೀಡಿ ಸಂಗ್ರಹ ಮಾಡಿದ ತೆರಿಗೆಯ ಮೊತ್ತದ ವಿವರವು ತಕ್ಷಣವೇ online ಮೂಲಕ ಪಂಚತಂತ್ರ ತಂತ್ರಾಂಶದಲ್ಲಿ update ಆಗುವುದು. ಅಂತರ್ಜಾಲ ಸಂಪರ್ಕ ಇಲ್ಲದಿದ್ದಲ್ಲಿ ರಶೀದಿ ನೀಡಿ, ನಂತರ online ನಲ್ಲಿ update ಮಾಡಲು ಕ್ರಮವಹಿಸಲಾಗುವುದು.

ಹಾಗೂ ಪ್ರಸ್ತುತ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಾಮಗಾರಿಗಳಿಗೆ ಸಂಬಂಧಿಸಿದ ಪ್ರಾರಂಭಿಕ ಹಂತದ ಫೋಟೋ, ಪರಿಶೀಲನಾ ಹಂತದ ಫೋಟೋ, ಅಂತಿಮ ಫೋಟೋಗಳನ್ನು ಹಾಗೂ GPS co-ordinates ಗಳನ್ನು manually ಮಾಡಲಾಗುತ್ತಿದ್ದು, ಈವರೆವಿಗೂ Geo-stamping ನ್ನು ಮಾಡಲಾಗುತ್ತಿರುವುದಿಲ್ಲ. Manually update ಮಾಡಲಾದ ಕಾಮಗಾರಿಯ ಫೋಟೋಗಳನ್ನು ಗಮನಿಸಿದಾಗ ಫೋಟೋಗಳಲ್ಲಿ ಸಾಕಷ್ಟು ಲೋಪಗಳು, ಪುನರಾವರ್ತನೆಗೊಂಡ ಫೋಟೋಗಳು ಇರುವುದು ಕಂಡುಬಂದಿರುತ್ತದೆ. GPS co-ordinates ಗಳಲ್ಲೂ ಸಾಕಷ್ಟು ಲೋಪಗಳನ್ನು ಗಮನಿಸಲಾಗಿದೆ. ಇದರಿಂದಾಗಿ ಜಿಲ್ಲಾಮಟ್ಟದಲ್ಲಿ ಫೋಟೋ auditing ಮಾಡಲು ಕಷ್ಟಕರವಾಗಿದೆ.

ಈ ಎಲ್ಲಾ ಅಂಶಗಳನ್ನು ಗಮನಿಸಿ, ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile Application (GSK App) ನ್ನು ಅಭಿವೃದ್ಧಿಪಡಿಸಲಾಗಿದ್ದು, ಸದರಿ Application ನಲ್ಲಿ Geostamping ಗೆ ಹೆಚ್ಚು ಪ್ರಾಮುಖ್ಯತೆಯನ್ನು ನೀಡಿದ್ದು, ಕಾಮಗಾರಿಯ ಫೋಟೋಗಳನ್ನು ತೆಗೆದು upload ಮಾಡಿದಾಗ ಕಾಮಗಾರಿ ಸ್ಥಳದ GPS co-ordinates ಗಳು automatic ಆಗಿ update ಆಗುವುದು.

ಇದರಿಂದಾಗಿ ಕಾಮಗಾರಿಗಳು ಪುನರಾವರ್ತನೆಯಾಗುವುದನ್ನು (duplication of works) ತಡೆಯಬಹುದು. ಸದರಿ ಪ್ರಕ್ರಿಯೆಯು ಲೋಪರಹಿತ ಮತ್ತು ಯಾವುದೇ ಅವ್ಯವಹಾರಕ್ಕೆ ಅವಕಾಶವಿಲ್ಲದಂತಹ ಪದ್ಧತಿಯನ್ನು ಜಾರಿಗೆ ತರುವ ದಿಸೆಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಆದ್ದರಿಂದ ಇನ್ನು ಮುಂದೆ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಫೋಟೋ ಅಳವಡಿಸುವುದು ಹಾಗೂ Geo-stamping ನ್ನು GSK App ನ ಮುಖಾಂತರವೇ ಮಾಡುವುದು ಕಡ್ಡಾಯಗೊಳಿಸಿದೆ.

ಇ-ಪಾವತಿ ಯೋಜನೆಯನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಾಗೂ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಹಾಗೂ ಇತರೆ ಅಧೀನ ಇಲಾಖೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್, ನಿರ್ಮಿತಿ ಕೇಂದ್ರಗಳಲ್ಲಿ **ದಿನಾಂಕ:02.10.2016 ರಿಂದ ಕಡ್ಡಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ.** ಅದರಂತೆ ಈ ಅದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/22/ಗ.ಕೋಶ/2016, ಬೆಂಗಳೂರು, ದಿನಾಂಕ:24.09.2016.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ NIC ಮುಖಾಂತರ ಅಭಿವೃದ್ಧಿಪಡಿಸಿರುವ Mobile Application ಗಳಾದ ಇ-ಪಾವತಿಯನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಹಾಗೂ GSK App ನ್ನು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಹಾಗೂ ಇತರೆ ಅಧೀನ ಇಲಾಖೆಗಳಲ್ಲಿ ದಿನಾಂಕ:02.10.2016 ರಿಂದ ಅನುಷ್ಠಾನಗೊಳಿಸಲು ಕಡ್ಡಾಯಗೊಳಿಸಿದೆ. ಕಾಮಗಾರಿಗಳ ಪ್ರಾರಂಭಿಕ ಹಂತದ ಫೋಟೋ, ಪರಿಶೀಲನಾ ಹಂತದ ಫೋಟೋ, ಅಂತಿಮ ಫೋಟೋಗಳನ್ನು ಅಳವಡಿಸುವುದು ಹಾಗೂ Geo-stamping ನ್ನು GSK App ನ ಮುಖಾಂತರವೇ ಮಾಡುವುದು ಕಡ್ಡಾಯಗೊಳಿಸಿದೆ. ಈ ಬಗ್ಗೆ ಎಲ್ಲಾ ಅನುಷ್ಠಾನಾಧಿಕಾರಿಗಳು ಸೂಕ್ತ ಕ್ರಮವಹಿಸಿ ತಂತ್ರಾಂಶಗಳ ಕ್ರಮಬದ್ಧ ಮತ್ತು ಶಿಸ್ತುಬದ್ಧ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಮಹದೇವ)**
ನಿರ್ದೇಶಕರು (ಇ-ಆಡಳಿತ) ಹಾಗೂ
ಪ/ನಿ ಸರ್ಕಾರದ ಉಪಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3. ಗ್ರಾಅಪ ಇಲಾಖೆಯ ಎಲ್ಲಾ ನಿರ್ದೇಶಕರುಗಳು.
4. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್ಐಸಿ, ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

.....3

6. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL).
9. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ, (KRRDA).
10. ನೋಡಲ್ ಅಧಿಕಾರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
11. ನೋಡಲ್ ಅಧಿಕಾರಿ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
12. ನೋಡಲ್ ಅಧಿಕಾರಿ, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (KRIDL).
13. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ರಾಜ್ಯದ ಎಲ್ಲಾ ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ- ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಇವರ ಮುಖಾಂತರ.
14. ನೋಡಲ್ ಅಧಿಕಾರಿ, ಕರ್ನಾಟಕ ರೂರಲ್ ಡೆವಲಪ್‌ಮೆಂಟ್ ಏಜೆನ್ಸಿ (KRRDA).
15. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳು ಮತ್ತು ಉಪಕಾರ್ಯದರ್ಶಿಗಳು.
16. ನೋಡಲ್ ಅಧಿಕಾರಿ, ನಿರ್ಮಿತಿ ಕೇಂದ್ರ, ಬೆಂಗಳೂರು.
17. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಹಣಾಧಿಕಾರಿಗಳು.
18. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ-ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳ ಮುಖಾಂತರ.
19. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಇವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ ಬೆಂಗಳೂರು.